**ದಿನಾಂಕ: 15-11-2023 ರಂದು ಸಾಕ್ಷಿಧಾರರನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಂದುವರೆದ ಮುಖ್ಯ ವಿಚಾರಣೆ: ವಾದಿ ಪರ ಶ್ರೀ.ಎಸ್.ಡಿ.ಎಂ. ವಕೀಲರಿಂದ**

ನನ್ನ ಮುಖ್ಯ ವಿಚಾರಣೆಯ ಸಾಕ್ಷಿಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿರುತ್ತೇನೆ . ಅದರಲ್ಲಿನ ಸಂಗತಿಗಳೆಲ್ಲ ಸತ್ಯವಿದ್ದು, ಅವುಗಳನ್ನು ನಾನೇ ಹೇಳಿ ಬರೆಯಿಸಿರುತ್ತೇನೆ. ಪ್ರಮಾಣ ಪತ್ರವನ್ನು ನನ್ನ ಮುಖ್ಯ ವಿಚಾರಣೆಯ ಸಾಕ್ಷ್ಯವನ್ನಾಗಿ ಪರಿಗಣಿಸಬೇಕೆಂದು ಪ್ರಾರ್ಥಿಸುತ್ತೇನೆ

ವಾದಿ ಮತ್ತು ಪ್ರತಿವಾದಿಯರ ನಡುವೆ ಆದ ಸಂಚಕಾರ ಪತ್ರ ನೋಡಿದರೆ ಗುರುತಿಸುತ್ತೇನೆ ಅದಕ್ಕೆ ನಾನು ಸಾಕ್ಷಿದಾರನಾಗಿ ಸಹಿ ಮಾಡಿರುತ್ತೇನೆ. ಆ ಸಂಚಕಾರ ಪತ್ರವನ್ನು ನಿಪಿ-2 ಎಂದು ಈಗಾಗಲೇ ಗುರುತಿಸಲಾಗಿದೆ. ವಾದಿಯ ಸಹಿಯನ್ನು ನೋಡಿದರೆ ಗುರುತಿಸುತ್ತೇನೆ. ಅದನ್ನು ಈಗಾಗಲೇ ನಿಪಿ-2(ಎ) ಎಂದು ಗುರುತಿಸಲಾಗಿದೆ. 1 ನೇ ಪ್ರತಿವಾದಿಯ ಸಹಿಯನ್ನು ನೋಡಿದರೆ ಗುರುತಿಸುತ್ತೇನೆ. ಅದನ್ನು ಈಗಾಲೇ ನಿಪಿ-2(ಬಿ) ಎಂದು ಗುರುತಿಸಲಾಗಿದೆ. ಅದರಲ್ಲಿರುವ ನನ್ನ ಸಹಿಯನ್ನು ನೋಡಿದರೆ ಗುರುತಿಸುತ್ತೇನೆ. ಅದನ್ನು ಈಗಾಗಲೇ ನಿಪಿ-2 (ಎಫ್) ಗುರುತಿಸಲಾಗಿದೆ. ಆ ಸಂದರ್ಭದಲ್ಲಿ ಮತ್ತೊಬ್ಬ ಸಾಕ್ಷಿದಾರರಾದ ತಿರುಕನಗೌಡ ಬಸನಗೌಡ ಕಲ್ಲೇಗೌಡ್ರರವರ ಸಹಿಯನ್ನು ನೋಡಿದರೆ ಗುರುತಿಸುತ್ತೇನೆ. ಅದು ನಿಪಿ-2(ಜಿ) ಎಂದು ಈಗಾಗಲೇ ಗುರುತಿಸಲಾಗಿದೆ. ಅದೇ ರೀತಿ ಪ್ರತಿವಾದಿ 2 ರಿಂದ 4 ರವರ ಸಹಿಗಳನ್ನು ನೋಡಿದರೆ ಗುರುತಿಸುತ್ತೇನೆ. ಅವುಗಳನ್ನು ಕ್ರಮವಾಗಿ ನಿಪಿ-2 (ಸಿ, ಡಿ ಮತ್ತು ಇ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಪ್ರತಿವಾದಿ ಪರ ಶ್ರೀ.ಸಿ.ಪಿ.ಜಿ. ವಕೀಲರಿಂದಃ**

ಕಾಲಾವಕಾಶ ಕೋರಿದ್ದು ನೀಡಲಾಗಿದೆ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ನ. ಸ. ಓ. ಹೇ. ಕೆ ಸರಿ ಇದೆ

ಎಂದು ಒಪ್ಪಿರುತ್ತಾರೆ.

ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು

ಸಾಕ್ಷಿದಾರರ ಸಹಿ

ಹಾನಗಲ್